ಪ್ರಸ್ತಾವ ಮಂಡಿಸಲ್ಪಟ್ಟಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "ಸದರಿ ವಿಧೇಯಕದಲ್ಲಿ 6ನೇ ಖಂಡದಲ್ಲಿ (1) ನೇ ಉಪಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು ಎಂದರೆ:- (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಅದರಲ್ಲಿ ನಿರ್ದಿಷ್ಟಪಡಿಸಬಹುದಾದಂತೆ, ಅಂಥ ಸದಸ್ಯರುಗಳನ್ನು ಒಳಗೊಂಡ ರಾಜ್ಯ ಮಟ್ಟದ ಏಕ ಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿ ಎಂದು ಕರೆಯಲಾಗುವ ಏಕ ಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿಯನ್ನು ರಚಿಸಬಹುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 6 ತಿದ್ದುಪಡಿಯಾದ ರೀತಿಯಲ್ಲಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ: "ಖಂಡ 6 ತಿದ್ದುಪಡಿಯಾದ ರೀತಿಯಲ್ಲಿ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 6 ತಿದ್ದುಪಡಿಯಾದ ರೀತಿಯಲ್ಲಿ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 7 ರಿಂದ 23ರವರೆಗೆ

ಅಧ್ಯಕ್ಷರು: "ಖಂಡ 7 ರಿಂದ 23 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 7 ರಿಂದ 23 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಖಂಡ : 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ: "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಆರ್.ವಿ.ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು): ಮಾನ್ಯ ಅಧ್ಯಕ್ಷರೇ, "2002ರ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕವನ್ನು ತಿದ್ದುಪಡಿಯಾದ ರೀತಿಯಲ್ಲಿ ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ: "2002ರ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

12. ಪ್ರಕಟಣೆ

ಅಧ್ಯಕ್ಷರು : ವಿಧಾನಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ

ರೂಪದಲ್ಲಿರುವ ಕರ್ನಾಟಕ ವಿಧಾನಪರಿಷತ್ತಿನ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ ತಿದ್ದುಪಡಿ ವಿಧೇಯಕ-2002 ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ನಡವಳಿಕೆ ನಿಯಮ-111 (1) ಅವರ ಮೇರೆಗೆ ಕರ್ನಾಟಕ ವಿಧಾನಪರಿಷತ್ತು ದಿನಾಂಕ: 8ನೇ ಆಗಸ್ಟ್ 2002ರಂದು ಯಾವುದೇ ತಿದ್ದುಪಡಿಗಳಿಲ್ಲದೆ. ಅಂಗೀಕರಿಸಿದೆ ಎಂದು ತಿಳಿಸಿರುತ್ತಾರೆ.

## 13. ಶಾಸನ ರಚನೆ

### (ಅ) ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿದೇಯಕ, 2002, ಪರ್ಯಾಲೋಚನಾ ಪ್ರಸ್ತಾವ.

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ ಸಚಿವರು) ಮಾನ್ಯ ಅಧ್ಯಕ್ಷರೇ, "2002ರ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯ ಸಂಸ್ಥೆಗಳ (ತಿದ್ದುಪಡಿ) ವಿದೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ".

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು

ಸನ್ಮಾನ್ಯ ಉಪಾಧ್ಯಕ್ಷರು (ಶ್ರೀ ಮನೋಹರ್ ಹೆಚ್. ತಹಸೀಲ್ದಾರ್) ಅಧ್ಯಕ್ಷರು ಪೀಠವನ್ನಲಂಕರಿಸಿದ್ದರು.

+ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ ಸಚಿವರು):- ಮಾನ್ಯ ಅಧ್ಯಕ್ಷರೇ, ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯ ಸಂಸ್ಥೆಗಳ ವಿದೇಯಕ ಏನಿದೆ ಈ ಆಕ್ಟ್‌ನ ಸೆಕ್ಷನ್ 25ರ ಪ್ರಕಾರ ವುಮನ್‌ಗೆ ಶಿಫ್ಟ್‌ನಲ್ಲಿ ಕೆಲಸ ಮಾಡುವುದಕ್ಕೆ ಪ್ರಾವಿಜನ್ ಇಲ್ಲ, ನಮ್ಮ ಕರ್ನಾಟಕದ ಬೆಂಗಳೂರು ಸಿಟಿಯಲ್ಲಿ 1500 ಐ.ಟಿ. ಎಸ್ಟಾಬ್ಲಿಷ್‌ಮೆಂಟ್ಸ್ ಇವೆ. about 30000 workers are working in these establishments. Out of that 22,000 are men and 8000 are women. Here I am bringing a small amendment, just to exempt the women folk to work in the night shift system. In America and Japan, there are Call Centres where many Kannadigas are working in medical transcription and other works. Here it is night time and there it is day time. They may not be able to work during night shifts if we don't give exemptions. So, this is a small amendment in the larger interest of employment. Now in the coming three years the NASSCOM has said that about 1.6 million workers are needed in this area of employment. Here as per the Software Companies Association and others, they say that they may require at least 30,000 people in Bangalore in the coming years. This is a small amendment just to provide job facilities to women to work in the night shifts. But one condition is there; through the amendment, we are providing a condition that the women employees should be provided with trasportation facility, security facility and they should take them in batchwise. In this background this amendment is brought in and supposing we don't bring this amendment, there will be a